Bruhat Bengaluru Mahanagara Palike

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡೆಲ್ ಅಧಿಕಾರಿಗಳು/ಸಹಾಯಕ ಅಭಿಯಂತರರ ಕಛೇರಿ ನಾಗಪುರ ಉಪವಿಭಾಗ, ಬಿ.ಬಿ.ಎಂ.ಪಿ,
12ನೇ ಮುಖ್ಯರಸ್ತೆ, 11ನೇ ಕ್ರಾಸ್, ನಾಗಪುರ, ಬಿಬಿಎಂಪಿ ಕಛೇರಿ ಸಂಕೀರ್ಣ ಕಟ್ಟಡ, ಮಹಾಲಕ್ಷ್ಮೀಲೇಔಟ್, ಬೆಂಗಳೂರು-86,

# ದಿನಾಂಕ:-03-09-2022 ರಂದು ನಡೆದ ವಾರ್ಡ್ ಸಂಖ್ಯೆ:67ರ ಹಾಗು ಹೊಸ ವಾರ್ಡ್ ಸಂಖ್ಯೆ:51ರ ವಾರ್ಡ್ ಸಮಿತಿ ಸಭೆಯ ನಡವಳಿ

ಉಲ್ಲೇಖ:- (1) ಸಮಿತಿ ಸಭೆ ಸೂಚಿ ಪತ್ರ ಸಂಖ್ಯೆ:ಬಿ12(5)/ಪಿಆರ್/35/2020-21 ದಿನಾಂಕ:21:09:2020
(2)ಸಭೆ ಸೂಚನಾ ಪತ್ರ ಸಂ. ಸ.ಅ./ವಾ-67/ಪಿ.ಆರ್/49/2022-23 ದಿನಾಂಕ:01-09-2022

| ಕ್ರ.ಸ. | ಶ್ರೀಯುತರ ಹೆಸರು | ಹುದ್ದೆ |
|---|---|---|
| 1. | ಶ್ರೀ. ಪಿ. ವಿಶ್ವನಾಥ್ | ಮುಖ್ಯ ಅಭಿಯಂತರರು (ದಾಸರಹಳ್ಳಿ ವಲಯ), ಬಿಬಿಎಂಪಿ, ನೋಡೆಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಂಖ್ಯೆ:67. |
| 2. | ಶ್ರೀ. ಬಿ. ಸಿ ರವಿಕುಮಾರ್ | ಸಹಾಯಕ ಅಭಿಯಂತರರು ವಾರ್ಡ-67 ಹಾಗು ಸಮಿತಿ ಕಾರ್ಯದರ್ಶಿಗಳು. |
| 3. | ಶ್ರೀ. ಉದಯ ಶಂಕರ್ | 1ನೇ 'ಆರ್'ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು. |
| 4. | ಶ್ರೀ. ಗೀತಾ ಕೇನಾಲ್ | ವಾರ್ಡ್ ಸಮಿತಿ ಸದಸ್ಯರು. |
| 5. | ಶ್ರೀ. ಮಂಜುಳಾ | ವಾರ್ಡ್ ಸಮಿತಿ ಸದಸ್ಯರು. |
| 6. | ಶ್ರೀ. ರಂಗರಾಜು | ವಾರ್ಡ್‌ನ ನಾಗರೀಕರು. |
| 7. | ಶ್ರೀ. ಗಂಗಯ್ಯ | ಹಿರಿಯ ಆರೋಗ್ಯ ಪರೀವಿಕ್ಷಕರು, ವಾರ್ಡ್-67. |
| 8. | ಶ್ರೀ. ಸಂತೋಶ್ ರಾಜ್ | ಕಿರಿಯ ಆರೋಗ್ಯ ಪರೀವಿಕ್ಷಕರು, ವಾರ್ಡ್ -67. |
| 9. | ಶ್ರೀ. ಮಂಜುನಾಥ್ | ಕಂದಾಯ ಪರೀವಿಕ್ಷಕರು, ವಾರ್ಡ್ ಸಂಖ್ಯೆ-67. |
| 10. | ಶ್ರೀ. ಗಿರೀಶ್. ಬಿ | ಬೆಂ.ಜ.ಮಂ ಜಲ ಪರೀವಿಕ್ಷಕರು ಎನ್ ಡಬ್ಲೂ-1. |
| 11. | ಶ್ರೀ. ಮಲ್ಲಯ್ಯ | ಅರಣ್ಯ ಇಲಾಖೆ ಸಿಬ್ಬಂದಿ |
| 12. | ಶ್ರೀ. ಮಂಜುನಾಥ್ | ತೋಟಗಾರಿಕೆ ಇಲಾಖೆ, ಮೇಸ್ತ್ರೀ. |
| 13. | ಶ್ರೀ. ಶ್ರೀನಿವಾಸ್ ಎನ್ | ಬೆಂ.ಜ.ಮಂ ಜಲ ಪರೀವಿಕ್ಷಕರು ಎನ್ ಡಬ್ಲೂ-2. |
| 14. | ಶ್ರೀ. ಎಚ್ ರಮೇಶ್ | ಕಿರಿಯ ಅಭಿಯಂತರರು, ಬೆಸ್ಕಂ ಎನ್-7 |
| 15. | ಶ್ರೀ. ಮಂಜುನಾಥ್ ಗೌಡ | ಪೋಲಿಸ್ ಪಿ.ಸಿ, ರಾಜಾಜಿನಗರ ಸಂಚಾರಿ ಪೊಲೀಸ್ ಠಾಣೆ. |
| 16. | ಸಹಾಯಕ ಅಭಿಯಂತರರು, ಬೋರ್ವೆಲ್ ನಿರ್ವಹಣೆ. | ಗೈರು ಹಾಜರಿ. |



ಮು.ತಿ.ನೋ.

Scanned by CamScanner

| | | |
|---|---|---|
| 17. | ಪಶು ಕೆಲಸ ವಿಭಾಗ. | ಗೈರು ಹಾಜರಿ. |
| 18. | ವಾರ್ಡ್ ಮಾರ್ಷಲ್, ವಾರ್ಡ್ ಸಂಖ್ಯೆ-67. | ಗೈರು ಹಾಜರಿ. |
| 19. | ಸುಬ್ರಮಣ್ಯನಗರ ಪೊಲೀಸ್ ಠಾಣೆ. | ಗೈರು ಹಾಜರಿ. |
| 20. | ಮಹಾಲಕ್ಷ್ಮೀಲೇಔಟ್ ಪೊಲೀಸ್ ಠಾಣೆ. | ಗೈರು ಹಾಜರಿ. |
| 21. | ಮಲ್ಲೇಶ್ವರಂ ಸಂಚಾರಿ ಪೊಲೀಸ್ ಠಾಣೆ. | ಗೈರು ಹಾಜರಿ. |
| 22. | ಸಹಾಯಕ ಅಭಿಯಂತರರು, ಬೆಸ್ಕಂ ಎನ್-1 ಉಪವಿಭಾಗ | ಗೈರು ಹಾಜರಿ. |
| 23. | ಅರಣ್ಯ ಇಲಾಖೆ ಸಿಬ್ಬಂದಿ | ಗೈರು ಹಾಜರಿ. |
| 24. | ಬೀದಿ ದೀಪ ನಿರ್ವಹಣೆ ಸಿಬ್ಬಂದಿ | ಗೈರು ಹಾಜರಿ. |

ವಾರ್ಡ್ ಸಮಿತಿ ಸಭೆಯ ಕಾರ್ಯದರ್ಶಿಗಳು ಮಾತನಾಡಿ ಸೆಪ್ಟೆಂಬರ್ ಮಾಹೆಯ ದಿ: 03/09/2022 ರಂದು ಮಧ್ಯಾನ 2:30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಅಭಿವೃದ್ಧಿ ಹಾಗೂ ಕುಂದುಕೊರತೆಗಳ ಬಗ್ಗೆ ಚ್ರ್ಚಿಸಲು ಕರೆದಿರುವ ಸಭೆಗೆ ಆಗಮಿಸಿರುವ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮತ್ತು ಸಮಿತಿ ಸದಸ್ಯರಿಗೆ ಸ್ವಾಗತ ಕೋರಿದರು. ಹಾಗೂ ವಾರ್ಡ್ ಸಂಖ್ಯೆ:67ರ ವಾಸ್ತವದ ಬಗ್ಗೆ ಕಿರು ಪರಿಚಯವನ್ನು ಮಂಡಿಸಿದರು.

ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮಾತನಾಡಿ ಸಮಿತಿಯ ಸದಸ್ಯರು ಮತ್ತು ಸ್ಥಳೀಯ ಸಾರ್ವಜನಿಕರು ತಮ್ಮ ತಮ್ಮ ಅವಹಾಲುಗಳನ್ನು ತಿಳಿಸಬೇಕೆಂದು ತಿಳಿಸಿದ ಹಿನ್ನೆಲೆಯಲ್ಲಿ ಸಮಿತಿಯ ಸದಸ್ಯರು ಈ ಕೆಳಕಂಡಂತೆ ವಾರ್ಡ್‌ನಲ್ಲಿ ಕಂಡುಬಂದಿರುವ ಸಮಸ್ಯೆಗಳನ್ನು ಸಭೆಗೆ ಮಂಡಿಸಿದರು.

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:

| | |
|---|---|
| ಶ್ರೀ. ರಂಗರಾಜು<br>ವಾರ್ಡ್‌ನ ನಾಗರೀಕರು. | ವಾರ್ಡ್‌ನ 1ನೇ ಎನ್ ಬ್ಲಾಕ್ ರಾಜಾಜಿನಗರದಲ್ಲಿ ಮರಗಳ ಟ್ರಿಮಿಂಗ್ ಮಾಡಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಮಲ್ಲಯ್ಯ<br>ಅರಣ್ಯ ಇಲಾಖೆ ಸಿಬ್ಬಂದಿ. | ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ 1ನೇ 'ಎನ್' ಬ್ಲಾಕ್ ರಾಜಾಜಿನಗರದಲ್ಲಿ ಮರಗಳ ಟ್ರಿಮಿಂಗ್ ಮಾಡಿಕೊಡುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ಮಂಜುಳಾ<br>ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ಕೇತಮಾರನಹಳ್ಳಿಯಲ್ಲಿ ಕಸ ಗುಡಿಸುವವರು ಮತ್ತು ಕಸ ತೆಗೆಯುವವರು ಸರಿಯಾದ ಸಮಯದಲ್ಲಿ ಬರುವುದಿಲ್ಲ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಸಂತೋಷ್ ರಾಜ್<br>ಕಿರಿಯ ಆರೋಗ್ಯ ಪರೀವಿಕ್ಷಕರು,<br>ವಾರ್ಡ್ -67 | ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಕೇತಮಾರನಹಳ್ಳಿಯಲ್ಲಿ ಕಸ ಗುಡಿಸಲು ಹೊಸದಾಗಿ ನಿಯೋಜಿಸಲಾಗಿದೆ ಆದ್ದರಿಂದ ತದನಂತರ ಯಾವುದೇ ಸಮಸ್ಯೆ ಉಂಟಾಗುವುದಿಲ್ಲ, ಮತ್ತು ದಿನನಿತ್ಯ ಕಸ 10 ಗಂಟೆಯೊಳಗೆ ಕಸ ತೆಗೆಯಲು ಆಟೋರವರಿಗೆ ಸೂಚಿಸಲಾಗಿದೆ ಎಂದು ಸಭೆಯಲ್ಲಿ ಮಾಹಿತಿ ಒದಗಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಪಿ.ಒ.ಡಬ್ಲೂ ಅನುದಾನದ ಅಡಿಯಲ್ಲಿ ತಗೆದುಕೊಂಡಿರುವ ಕಾಮಗಾರಿ ಪಟ್ಟಿಯನ್ನು ಸಭೆಯಲ್ಲಿ ಒದಿ ತಿಳಿಸಲಾಯಿತು ಸದರಿ ವಾರ್ಡ್‌ಗೆ 307 ಲಕ್ಷಗಳಷ್ಟು ಅನುದಾನ ಒದಗಿಸಿದ್ದು ಚರಡಿ ನಿರ್ಮಾಣ ಮಾಡಲು, ರಸ್ತೆ ಡಾಂಬರೀಕರಣ ಮಾಡಲು ಮತ್ತು ಪಾದಚಾರಿ ಮಾರ್ಗ ಅಭಿವೃದ್ಧಿಗೊಳಿಸಲು ಅನುದಾನವನ್ನು ಬಳಸಿಕೊಳ್ಳಲಾಗಿದೆ ಎಂದು ಸಭೆಗೆ ಮಾಹಿತಿ ಒದಗಿಸಿದರು. |



ಮು.ತಿ.ನೋ.

[signature]

Scanned by CamScanner

| | |
|---|---|
| | ಮತ್ತು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರಿಗೆ ತುರ್ತು ಕಾಮಗಾರಿ ನಡೆಸುವ ದೂರುಗಳಿದ್ದಲ್ಲಿ ಸಭೆಯಲ್ಲಿ ತಿಳಿಸಲು ಸೂಚಿಸಿದರು. |
| ಎಲ್ಲಾ ವಾರ್ಡ್ ಸಮಿತಿ ಸದಸ್ಯರು | ವಾರ್ಡ್‌ನ ಸಭೆಯಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರು ವಾರ್ಡ್‌ನಲ್ಲಿ ಪಾದಚಾರಿ ಮಾರ್ಗಗಳ ಯಾವುದೇ ದೂರುಗಳು ಇರುವುದಿಲ್ಲ ಮತ್ತು ಯಾವುದಾದರು ದೂರುಗಳಿದ್ದಲ್ಲಿ ವಾಟ್ಸ್ ಆ್ಯಪ್ ಮುಖಾಂತರ ಸಂದೇಶ ರವಾನಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ಮಾನ್ಯ ಮುಖ್ಯ ಆಯುಕ್ತರು ಸೂಚಿಸಿರುವಂತೆ ಚುನಾವಣೆ ಸಂಭಂಧಿತ ಅಂಶಗಳನ್ನು ಚರ್ಚಿಸಲು ಸಭೆಯಲ್ಲಿ ಹಾಜರಿದ್ದ ಕಂದಾಯ ಪರೀವಿಕ್ಷಕರಿಗೆ ಸೂಚಿಸಿದರು ಮತ್ತು ಸಭೆಯಲ್ಲಿ ಹಾಜರಿದ್ದ ಸಮಿತಿ ಸದಸ್ಯರಿಗೆ ಹಾಗು ನಾಗರೀಕರಿಗೆ ಚುನಾವಣೆ, ಮತದಾರರ ಗುರುತಿನ ಚೀಟಿಗೆ ಸಂಭಂಧಿಸಿದ ಮಾಹಿತಿಗಳನ್ನು ತಿಳಿದುಕೊಳಲು ಸಭೆಯಲ್ಲಿ ತಿಳಿಸಿದರು. |
| ಶ್ರೀ. ಮಂಜುನಾಥ್<br>ಕಂದಾಯ ಪರೀವಿಕ್ಷಕರು, ವಾರ್ಡ್ ಸಂಖ್ಯೆ–67. | ಯಾವುದೇ ಮತದಾರರು ಮತದಾನದಿಂದ ಹೊರಗುಳಿಯಬಾರದೆಂದು ಚುನಾವಣಾಧಿಕಾರಿಗಳು ನಾಗರಿಕರಿಗಾಗಿ ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಮಾಡಿಕೊಳ್ಳಲು, ತೆಗೆದು ಹಾಕಲು, ಪರೀಶೀಲನೆ ಮತ್ತು ದೃಢೀಕರಣ, ತಿದ್ದುಪಡಿ ಮಾಡಿಕೊಳ್ಳಲು ಇನ್ನು 7 ದಿನಗಳ ಕಾಲಾವಕಾಶವನ್ನು ಸಾರ್ವಜನಿಕರಿಗೆ ಮಾಡಿಕೊಡಲಾಗಿರುತ್ತದೆ ಆದ್ದರಿಂದ ಸಾರ್ವಜನಿಕರು ಈ ಎಲ್ಲಾ ಸೇವೆಗಳ ಅವಧಿಯನ್ನು 7 ದಿನಗಳವರೆಗೆ ವಿಸ್ತರಿಸಲಾಗಿರುತ್ತದೆ ಎಂದು ಸಭೆಗೆ ಮಾಹಿತಿ ಒದಗಿಸಿದರು. |
| ಶ್ರೀ. ಗೀತಾ ಕೀನಾಲ್<br>ವಾರ್ಡ್ ಸಮಿತಿ ಸದಸ್ಯರು. | ಮತದಾರರ ಗುರುತಿನ ಚೀಟಿಗೆ ಆಧಾರ್ ಲಿಂಕ್ ಮಾಡುವ ಬಗ್ಗೆ ಮಾಹಿತಿ ಒದಗಿಸಲು ಸಭೆಯಲ್ಲಿ ಕೋರಿದರು. |
| ಶ್ರೀ. ಮಂಜುನಾಥ್<br>ಕಂದಾಯ ಪರೀವಿಕ್ಷಕರು, ವಾರ್ಡ್ ಸಂಖ್ಯೆ–67. | ಮತದಾರರ ಗುರುತಿನ ಚೀಟಿಗೆ ಆಧಾರ್ ಲಿಂಕ್ ಮಾಡಲು ಮತ್ತು ಮತದಾರರು ಸೇರ್ಪಡೆ ಮಾಡಿಕೊಳ್ಳಲು, ತೆಗೆದು ಹಾಕಲು, ಪರೀಶೀಲನೆ ಮತ್ತು ದೃಢೀಕರಣ, ತಿದ್ದುಪಡಿ ಮಾಡಿಕೊಳ್ಳಲು ಈ ಕೆಳಕಂಡಂತೆ ಅನುಸರಿಸಬಹುದು.<br>1. ಮತದಾರರ ಸಹಾಯವಾಣಿ (Voters Help line)ಮೊಬೈಲ್ ಆ್ಯಪ್‌ನಲ್ಲಿ ಫಾರಂ(ಬಿ) ಯಿಂದ ಲಿಂಕ್ ಮಾಡಬಹುದು<br>2. ಹೊಸ ಎನ್ ವಿ ಎಸ್ ಪಿ ಪೋರ್ಟಲ್ (www.nvsp.in)ಗೆ ಬೇಟಿ ನೀಡುವುದು.<br>3. ಶುಲ್ಕ ರಹಿತ ಸಹಾಯವಾಣಿ 1950ಗೆ ಮತದಾರರು ಕರೆ ಮಾಡುವುದು.<br>4. ಮತದಾರರ ಪೋರ್ಟಲ್ (www.voterportal.eci.gov.in)ಗೆ ಬೇಟಿ ನೀಡುವುದು.<br>ಮತ್ತು ನಿಮ್ಮ ಹತ್ತಿರದ ಕೆಳಕಂಡ ಕೇಂದ್ರಕ್ಕೆ ಬೇಟಿ ನೀಡಲು ಸಭೆಯಲ್ಲಿ ತಿಳಿಸಿದರು.<br>1. ಸಾಮಾನ್ಯ ಸೇವಾ ಕೇಂದ್ರ.<br>2. ಮತದಾರರ ನೋಂದಣಿ ಅಧಿಕಾರಿಗಳ ಕಛೇರಿಯ ಮತದಾರರ ಸೌಲಭ್ಯ ಕೇಂದ್ರ<br>3. ಮತಗಟ್ಟೆ ಅಧಿಕಾರಿ.<br>ಎಂದು ಸಭೆಗೆ ಮಾಹಿತಿ ಒದಗಿಸಿದರು ಮತ್ತು (Voters Help line) ಆ್ಯಪ್ ಲಿಂಕ್‌ಅನ್ನು ವಾಟ್ಸ್ ಆ್ಯಪ್ ಮುಖಾಂತರ ರವಾನಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಕಿರಿಯ ಆರೋಗ್ಯ ಪರೀವಿಕ್ಷಕರು ಹಾಗು ಮಾರ್ಷಲ್ ಸಮುಖದಲ್ಲಿ ಇನ್ನು ಹೆಚ್ಚು ಕಡೆ ಗಸ್ತು ತಿರುಗಿ ಕಪ್ಪು ಚುಕ್ಕಿ ಪ್ರದೇಶಗಳಲ್ಲಿ ಹಾಗು ಎಲ್ಲೆಂದರಲ್ಲಿ ಕಸ ಹಾಕ್ಕುತ್ತಿರುವವರ ವಿರುದ್ಧ ದಂಡ ವಿಧಿಸಲು ಸೂಚಿಸಿದರು ಹಾಗು ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ಬಳಕೆದಾರರಿಗೂ/ಸಾರ್ವಜನಿಕರಿಗೆ ಕೂಡ ದಂಡ ವಿಧಿಸಲು ಸೂಚಿಸಿದರು. |
| ಶ್ರೀ. ಸಂತೋಶ್ ರಾಜ್<br>ಕಿರಿಯ ಆರೋಗ್ಯ ಪರೀವಿಕ್ಷಕರು,<br>ವಾರ್ಡ್ –67 | ವಾರ್ಡ್‌ನ ನೋಡೆಲ್ ಅಧಿಕಾರಿಗಳು ಸೂಚಿಸಿರುವಂತೆ ಕ್ರಮ ವಹಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರು ವಾರ್ಡ–67 | ವಾರ್ಡ್‌ನಲ್ಲಿ ಸಾರ್ವಜನಿಕರು ಮನೆಯ ಡೆಬ್ರೀಸ್‌ಅನ್ನು ರಸ್ತೆಯ ಮೇಲೆ ಹಾಕಿ ತೆರವುಗೊಳಿಸುತ್ತಿರುವುದಿಲ್ಲ, ಮಳೆಗಾಲ ಶುರುವಾಗುತ್ತಿರುವುದರಿಂದ ಡೆಬ್ರೀಸ್ ರಸ್ತೆಯ ಪಕ್ಕದಲ್ಲಿರುವ ಚರಂಡಿಗೆ ಹೋಗಿ ಸದರಿ ಚರಂಡಿ ಬ್ಲಾಕ್ ಆಗುವ ಸದ್ಯತೆಯಿರುತ್ತದೆ ಇದರಿಂದ ಸಾರ್ವಜನಿಕರು ಡೆಬ್ರೀಸ್ ಹಾಕಿ ತೆರವುಗೊಳಿಸದ ಮನೆಯ ಮಾಲೀಕರಿಗೆ ಮಾರ್ಷಲ್ ದಂಡ ಹಾಕಲು ಸಭೆಯಲ್ಲಿ ಸೂಚಿಸಿದರು. |



ಮು.ತಿ.ನೋ.

Scanned by CamScanner

| | |
|---|---|
| ಶ್ರೀ. ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಹಾಯಕ ಅಭಿಯಂತರರ ದೂರಿನಂತೆ ವಾರ್ಡ್ ಮಾರ್ಷಲ್ ಕ್ರಮವಹಿಸಲು ಸೂಚಿಸಿದರು. |
| ಶ್ರೀ. ಗೀತಾ ಕೀನಾಲ್ ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ 1ನೇ ಕೆ ಬ್ಲಾಕ್ ರಾಜಾಜಿನಗರದಲ್ಲಿ ಹಲವಾರು ರಸ್ತೆ ಗುಂಡಿಗಳಿವೆ ಎಂದು ಸಭೆಯಲ್ಲಿ ಪ್ರಸ್ಥಾಪಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು,ವಾರ್ಡ್–67 | ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ 1ನೇ ಕೆ ಬ್ಲಾಕ್ ರಾಜಾಜಿನಗರದಲ್ಲಿ ಪ್ಯಾಚ್ ವರ್ಕ್ ಮಾಡಲಾಗುತ್ತಿದೆ ಹಾಗು ಮಳೆ ಸತತವಾಗಿ ಸುರಿಯುತ್ತಿರುವುದರಿಂದ ರಸ್ತೆಗೆ ಡಾಂಬರಿಕರಣ ಮಾಡಲು ಸದ್ಯವಾಗುತ್ತಿಲ್ಲ, ಮಳೆಗಾಲ ಮುಗಿದ ನಂತರ ರಸ್ತೆಗಳಿಗೆ ಡಾಂಬರಿಕರಣ ಮಾಡಲಾಗುತ್ತದೆ ಎಂದು ಸಭೆಗೆ ಮಾಹಿತಿ ಒದಗಿಸಿದರು. |
| ಶ್ರೀ. ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ರಾಜಾಜಿನಗರ 1ನೇ ಬ್ಲಾಕ್‌ನಲ್ಲಿ ನೂತನವಾಗಿ ಸ್ಕೈವಾಕ್ ನಿರ್ಮಾಣ ಮಾಡಿದ್ದು ಸದರಿ ಸ್ಕೈವಾಕ್ ಪೂರ್ಣಮಾಡಿ ಸಾರ್ವಜನಿಕರ ಬಳಕೆಗೆ ಅನುವು ಮಾಡಿಕೊಡಲು ಸಭೆಯಲ್ಲಿ ತಿಳಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು,ವಾರ್ಡ್–67 | ವಾರ್ಡ್‌ನ ನೋಡೆಲ್ ಅಧಿಕಾರಿಗಳು ಸೂಚಿಸಿರುವಂತೆ ರಸ್ತೆ ಮೂಲ ಭೂತ ಸೌಕರ್ಯರವರಿಗೆ ಪತ್ರದ ಮೂಲಕ ತಿಳಿಸುವುದಾಗಿ ಸಭೆಯಲ್ಲಿ ತಿಳಿಸಿದರು. |

ವಾರ್ಡ್ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದೃಢೀಕೃತ ಮಾಹಿತಿಗಳನ್ನು ತಪ್ಪದೇ ವಾರ್ಡ್ ಕಮಿಟಿ ವಾರ್ಡ್–67 ವಾಟ್ಸ್ ಆಪ್ ಗ್ರೂಪ್ ನಲ್ಲಿ ಮತ್ತು ಪ್ರತಿ ವಾರ್ಡ್ ಸಮಿತಿ ಸಭೆಯಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು

**ಪ್ರತಿಯನ್ನು**

1. ಮಾನ್ಯ ವಲಯ ಉಪಆಯುಕ್ತರು (ಆಡಳಿತ), ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ಕೇಂದ್ರ ರವರ ಅವಗಾಹನು ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.

ಮು.ತಿ.ನೋ.



Scanned by CamScanner

11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ಪಶ್ಚಿಮ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

13/09/2022

ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು, ವಾರ್ಡ್– 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು ಹಾಗೂ
ನೋಡಲ್ ಅಧಿಕಾರಿಗಳು ವಾರ್ಡ್– 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned by CamScanner